ಹುಬ್ಬಳ್ಳಿಯಲ್ಲಿ ಹೈಕೋರ್ಟ್ ಪೀಠ ಸ್ಥಾಪನೆಯ ಬಗ್ಗೆ

30 (175) : ಶ್ರೀ ಹೊನ್ನಳ್ಳಿ ಜಬ್ಬಾರ್ ಖಾನ್ ಹೈಯತ್ ಖಾನ್ (ಹುಬ್ಬಳ್ಳಿ) ಮಾನ್ಯ ಮುಖ್ಯಮಂತ್ರಿಯವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಉತ್ತರ ಕರ್ನಾಟಕದ ಬಹು ದಿನಗಳ ಬೇಡಿಕೆಯಾದ ಹೈಕೋರ್ಟ್ ಪೀಠ ಸ್ಥಾಪನೆಯ ಪ್ರಕ್ರಿಯೆ ಯಾವ ಹಂತದಲ್ಲಿದೆ;

ಆ) ಹೈಕೋರ್ಟ್ ಪೀಠ ಸ್ಥಾಪನೆಗಾಗಿ ಸ್ಥಳ ನಿಗಧಿ ಪಡಿಸಲಾಗಿದೆಯೇ;

ಇ) ಹೈಕೋರ್ಟ್ ಪೀಠ ಸ್ಥಾಪನೆ ಕುರಿತು ಈ ವರೆಗೂ ಸರ್ಕಾರ ಕೈಗೊಂಡ ಕ್ರಮಗಳೇನು? (ಪೂರ್ಣ ವಿವರಗಳನ್ನು ನೀಡುವುದು) ?

ಶ್ರೀ ಎಸ್.ಎಂ. ಕೃಷ್ಣ (ಮುಖ್ಯಮಂತ್ರಿಯವರು) :

ಅ) ಗೌರವಾನ್ವಿತ ಮುಖ್ಯ ನ್ಯಾಯಾಧೀಶರ ಪರಿಶೀಲನೆಯಲ್ಲಿದೆ.

ಆ) ವಿಷಯವು ಗೌರವಾನ್ವಿತ ಮುಖ್ಯ ನ್ಯಾಯಾಧೀಶರ ಪರಿಶೀಲನೆಯಲ್ಲಿದೆ.

ಇ) ಗೌರವಾನ್ವಿತ ಮುಖ್ಯ ನ್ಯಾಯಾಧೀಶರಿಂದ ಆಯ್ಕೆ ಮಾಡಲ್ಪಡುವ ಸ್ಥಳದಲ್ಲಿ ಮೂಲಭೂತ ಸೌಕರ್ಯಗಳನ್ನು ಒದಗಿಸಲು 2003-04ರ ಆಯವ್ಯಯದಲ್ಲಿ 2014-00-102-0-05 ಲೆಕ್ಕ ಶೀರ್ಷಿಕೆಯಲ್ಲಿ ರೂ. 20.00 ಕೋಟಿಗಳ ಅನುದಾನವನ್ನು ಒದಗಿಸಲಾಗಿದೆ.

ಸ್ವಯಂ ಆಸ್ತಿ ತೆರಿಗೆಯಿಂದ ಬಂದ ಆದಾಯದ ಬಗ್ಗೆ

31 (176) : ಶ್ರೀ ಹೊನ್ನಳ್ಳಿ ಜಬ್ಬಾರ್ ಖಾನ್ ಹೈಯತ್ ಖಾನ್ (ಹುಬ್ಬಳ್ಳಿ) ಮಾನ್ಯ ನಗರಾಭಿವೃದ್ಧಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) 2002-2003 ರಲ್ಲಿ ಸ್ವಯಂ ಆಸ್ತಿ ತೆರಿಗೆಯಿಂದ ಹುಬ್ಬಳ್ಳಿ - ಧಾರವಾಡ ಮಹಾನಗರ ಪಾಲಿಕೆಗೆ ಬಂದ ಆದಾಯವೆಷ್ಟು; ಖರ್ಚು ಮಾಡಿದ ಹಣವೆಷ್ಟು;

ಆ) ಈ ಆದಾಯವನ್ನು ಯಾವ ಯಾವ ಕೆಲಸಕ್ಕೆ ಉಪಯೋಗ ಮಾಡಿಕೊಳ್ಳಲಾಗಿದೆ? (ವಿವರಗಳನ್ನು ತಿಳಿಸುವುದು)

ಶ್ರೀ ಡಿ.ಕೆ. ಶಿವಕುಮಾರ್ (ನಗರಾಭಿವೃದ್ಧಿ ಸಚಿವರು) :

ಅ) 2002-03ರಲ್ಲಿ ಸ್ವಯಂ ಘೋಷಿತ ಆಸ್ತಿ ತೆರಿಗೆಯಿಂದ ಹುಬ್ಬಳ್ಳಿ-ಧಾರವಾಡ ಮಹಾನಗರ ಪಾಲಿಕೆಗೆ ರೂ. 370.00 ಲಕ್ಷ ಆದಾಯ ಬಂದಿರುತ್ತದೆ. ಅದರಲ್ಲಿ ಯೋಜನೆ ಕುರಿತು ಪತ್ರಿಕೆಗಳಿಗೆ ನೀಡಿದ ಜಾಹೀರಾತು, ಕರಪತ್ರ ಕೈಪಿಡಿ ಹಾಗೂ ನಮೂನೆಗಳ ಮುದ್ರಣಕ್ಕೆ ಒಟ್ಟಾರೆ ರೂ. 03.70 ಲಕ್ಷಗಳನ್ನು ವೆಚ್ಚ ಮಾಡಲಾಗಿದೆ.

ಆ) ಮಹಾನಗರ ಪಾಲಿಕೆಗೆ ಸ್ವಯಂ ಘೋಷಿತ ಆಸ್ತಿ ತೆರಿಗೆ ಯೋಜನೆಯಿಂದ ಬಂದ ಹಣವನ್ನು ರಸ್ತೆ, ನೀರು, ಬೀದಿ ದೀಪ, ನಗರ ನೈರ್ಮಲ್ಯ, ಇತ್ಯಾದಿ ಸಾರ್ವಜನಿಕ ಸೌಲಭ್ಯಗಳನ್ನು ಒದಗಿಸಲು ಉಪಯೋಗಿಸಲಾಗಿದೆ.

ಉತ್ತರ ಕರ್ನಾಟಕದಲ್ಲಿ ಹೈಕೋರ್ಟ್ ಪೀಠ ಸ್ಥಾಪನೆ ಬಗ್ಗೆ

33 (312) : ಶ್ರೀ ಜಗದೀಶ್ ಶೆಟ್ಟರ್ (ಹುಬ್ಬಳ್ಳಿ ಗ್ರಾಮೀಣ) ಮಾನ್ಯ ಮುಖ್ಯಮಂತ್ರಿಯವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಉತ್ತರ ಕರ್ನಾಟಕ ಭಾಗದಲ್ಲಿ ಹೈಕೋರ್ಟ್ ಪೀಠ ಸ್ಥಾಪನೆಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು;

೪) ಈ ಪೀಠ ಸ್ಥಾಪನೆಗೆ ಮುಖ್ಯ ನ್ಯಾಯಮೂರ್ತಿಗಳೊಂದಿಗೆ ಚರ್ಚಿಸಲಾಗಿದೆಯೇ; ಹಾಗಿದ್ದಲ್ಲಿ ಮುಖ್ಯ ನ್ಯಾಯಮೂರ್ತಿಗಳ ಅಭಿಪ್ರಾಯವೇನು;

ಇ) ಪೀಠ ಸ್ಥಾಪನೆಗೆ ಉತ್ತರ ಕರ್ನಾಟಕ ಭಾಗದಲ್ಲಿ ಯಾವುದಾದರೊಂದು ನಿರ್ದಿಷ್ಟ ಸ್ಥಳಗಳನ್ನು ಗುರ್ತಿಸಲಾಗಿದೆಯೇ; ವಿವರ ನೀಡುವುದು;

ಈ) ಉತ್ತರ ಕರ್ನಾಟಕ ಭಾಗದಲ್ಲಿ ಹೈಕೋರ್ಟ್ ಪೀಠ ಸ್ಥಾಪಿಸಲು ಸರ್ಕಾರ ಮೀಸಲಿಟ್ಟಿರುವ ಹಣ ಎಷ್ಟು; ಹೈಕೋರ್ಟ್ ಪೀಠ ಸ್ಥಾಪನೆಗೆ ತಗಲುವ ಅಂದಾಜು ವೆಚ್ಚ ಎಷ್ಟು;

ಉ) 2004 ನೇ ಸಾಲಿನಲ್ಲಿಯೇ ಈ ಪೀಠ ಸ್ಥಾಪಿಸಲು ಸರ್ಕಾರ ಆದ್ಯತೆಯ ಮೇಲೆ ಕ್ರಮ ಕೈಗೊಳ್ಳುವುದೇ?

ಶ್ರೀ ಎಸ್.ಎಂ. ಕೃಷ್ಣ (ಮುಖ್ಯಮಂತ್ರಿಗಳು)

ಅ) ಸರ್ಕಾರ 2003–04 ರ ಸಾಲಿಗೆ ಹೈಕೋರ್ಟ್ ಪೀಠ ಸ್ಥಾಪನೆಗೆ ರೂ. 20.00 ಕೋಟಿಗಳ ಅನುದಾನವನ್ನು ಒದಗಿಸಿದೆ.

ಆ) ಹೌದು. ಗೌರವಾನ್ವಿತ ಮುಖ್ಯ ನ್ಯಾಯಾಧೀಶರವರ ಪೀಠ ಸ್ಥಾಪನೆ ಬಗ್ಗೆ ಪರಿಶೀಲಿಸುವುದಾಗಿ ತಿಳಿಸಿರುತ್ತಾರೆ.

ಇ) ಇಲ್ಲ.

ಈ) ಸರ್ಕಾರ 2003–04 ರ ಸಾಲಿಗೆ ಹೈಕೋರ್ಟ್ ಪೀಠ ಸ್ಥಾಪನೆಗೆ ರೂ. 20.00 ಕೋಟಿಗಳ ಅನುದಾನವನ್ನು ಮೀಸಲಿರಿಸಿದೆ. ಸ್ಥಳ ಗುರ್ತಿಸಿದ ಮೇಲೆ ಅಂದಾಜು ಮಾಡಲಾಗುವುದು.

ಉ) ಪೀಠ ಸ್ಥಾಪನೆಗೆ ಸ್ಥಳ ನಿಗಧಿಯಾದಲ್ಲಿ ಆ ಸ್ಥಳದಲ್ಲಿ ಮೂಲಭೂತ ಸೌಕರ್ಯ ಒದಗಿಸಲು ಸರ್ಕಾರ ಬದ್ದವಾಗಿದೆ.

ಆನ್ ಲೈನ್ ಲಾಟರಿಗಳ ಮೇಲೆ ವಿಧಿಸಲಾಗುವ ತೆರಿಗೆಯ ಬಗ್ಗೆ

35 (11) : ಶ್ರೀ ಜಯಪ್ರಕಾಶ್ ಹೆಗ್ಡೆ ಕೆ. (ಬ್ರಹ್ಮಾವರ) ಮಾನ್ಯ ಸಣ್ಣ ಉಳಿತಾಯ ರಾಜ್ಯ ಲಾಟರಿ, ವಿಮೆ ಹಾಗೂ ಆಗ್ರೋಪ್ರೊಸೆಸಿಂಗ್ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ರಾಜ್ಯದಲ್ಲಿ ಹಾಲಿ ಜಾರಿಯಲ್ಲಿರುವ ಆನ್‌ಲೈನ್ ಲಾಟರಿಗಳು ಯಾವ ಪದ್ಧತಿ ಅಥವಾ ವರ್ಗಕ್ಕೆ ಸೇರಿವೆ;

ಆ) ಈವರೆಗೆ ಆನ್ ಲೈನ್ ಲಾಟರಿಯ ಮೇಲೆ ಮನೋರಂಜನಾ ತೆರಿಗೆಯನ್ನು ವಿಧಿಸಲಾಗುತ್ತಿದೆಯೇ;

ಇ) ಇದಲ್ಲದೇ, ಆನ್‌ಲೈನ್ ಲಾಟರಿಯ ಮೇಲೆ ಬೇರೆ ತೆರಿಗೆಯನ್ನು ವಿಧಿಸುವ ಉದ್ದೇಶವಿದೆಯೇ; ಇದ್ದಲ್ಲಿ, ಯಾವ ಆಧಾರದ ಮೇಲೆ ವಿಧಿಸಲಾಗುವುದು;

ಈ) ಯಾವ ಯಾವ ಲಾಟರಿ ಕಂಪನಿಗಳು ಯಾವ-ಯಾವ ಹೆಸರಿನಲ್ಲಿ ಲಾಟರಿ ನಡೆಸುತ್ತಿದೆ?

ಶ್ರೀ ಬಾಬುರಾವ್ ಬಸವಣ್ಣಪ್ಪ ಚಿಂಚನ್ಸೂರ್ (ಸಣ್ಣ ಉಳಿತಾಯ, ರಾಜ್ಯ ಲಾಟರಿ, ವಿಮೆ ಹಾಗೂ ಆಗ್ರೋ ಪ್ರೋಸೆಸಿಂಗ್ ರಾಜ್ಯ ಸಚಿವರು)

ಅ) ಕರ್ನಾಟಕ ರಾಜ್ಯದಲ್ಲಿ ಜಾರಿಯಲ್ಲಿರುವ ಆನ್‌ಲೈನ್ ಲಾಟರಿಗಳು ಗಣಕೀಕೃತ ನೆಟ್‌ವರ್ಕ್ ಲಾಟರಿ ವರ್ಗಕ್ಕೆ ಸೇರಿವೆ.